**ಹಿರಿಯ ಶ್ರೇಣಿ ನ್ಯಾಯಿಕ ದಂಡಾಧಿಕಾರಿಗಳ ನ್ಯಾಯಾಲಯ, ದೇವದುರ್ಗ.**

**CC.No.438/2023**

**Cw-1 Pw-1**

| | | |
|---|---|---|
| ಸಾಕ್ಷಿದಾರನ ಹೆಸರು | ಃ | ಸಣ್ಣ ಈರೇಶ ತಂದೆ ಚಂದಪ್ಪ |
| ವಯಸ್ಸು | ಃ | 39 ವರ್ಷ |
| ಉದ್ಯೋಗ | ಃ | ಪಿಎಸ್ಐ |
| ವಾಸಸ್ಥಳ | ಃ | ಮಾನವಿ |
| ಪ್ರಮಾಣೀಕರಿಸಿದ ದಿನಾಂಕ | ಃ | 24-01-2025 |

---

**ಮುಖ್ಯ ವಿಚಾರಣೆಃ ಮಾನ್ಯ ಸ ಸ ಅ ರವರಿಂದ.**

ನಾನು ದಿನಾಂಕ 02-03-2021 ರಿಂದ ದಿನಾಂಕ 08-08-2023 ರ ವರೆಗೆ ಗಬ್ಬೂರು ಪೊಲೀಸ ಠಾಣೆಯಲ್ಲಿ ಪಿಎಸ್ಐ ಎಂದು ಕರ್ತವ್ಯ ನಿರ್ವಹಿಸಿರುತ್ತೇನೆ.

ದಿನಾಂಕ **08-05-2021** ರಂದು ನಾನು ಮತ್ತು ನಮ್ಮ ಸಿಬ್ಬಂದಿ ಕೋವಿಡ್ ನಿಮಿತ್ಯ ಠಾಣಾ ವ್ಯಾಪ್ತಿಯ ಹಳ್ಳಿಗಳಲ್ಲಿ ಪೆಟ್ರೋಲಿಂಗ್ ಕರ್ತವ್ಯ ಮಾಡುತ್ತಿರುವಾಗ ಹುನಗುಂಡಬಾಡ ಗ್ರಾಮಕ್ಕೆ ಹೋದಾಗ ಮಾರೆಮ್ಮ ದೇವಿಯ ಗುಡಿಯ ಹತ್ತಿರ ಹೋದಾಗ ಬಾಪುಗೌಡ ತಂದೆ ಗಂಗಾಧರ ಇತನು ತನ್ನ ಅಂಗಡಿಯಲ್ಲಿ ಜನರಿಗೆ ಸಾಮಾಗ್ರಿಗಳನ್ನು ತೆಗೆದುಕೊಂಡು ಹೋಗಲು ಅನುಕೂಲ ಮಾಡುತ್ತಿದ್ದು ಸದರಿ ಸಂದರ್ಭದಲ್ಲಿ ಸರಕಾರದ ಕೋವಿಡ್ ಮಾರ್ಗಸೂಚಿಗಳನ್ನು ಪಾಲಿಸದೇ ಸಾರ್ವಜನಿಕರು ಮಾಸ್ಕ ಧರಿಸದೇ ಸಾಮಾಜಿಕ ಅಂತರ ಕಾಯ್ದುಕೊಳ್ಳದೇ ಅಂಗಡಿಯಿಂದ ಸಾಮಾಗ್ರಿ ತೆಗೆದುಕೊಂಡು ಹೋಗುತ್ತಿದ್ದು ಸದರಿ ಅಂಗಡಿಯ ಮಾಲೀಕರಿಗೆ ಅಂಗಡಿ ಮುಚ್ಚುವಂತೆ ಹೇಳಿದ್ದರೂ ಅಂಗಡಿಯನ್ನು ತೆರೆದು ಕರೋನಾ ವೈರಸ್ ಹರಡುವಿಕೆ ತಡೆಗಟ್ಟಲು ತೆಗೆದುಕೊಳ್ಳಬೇಕಾದ ಮುಂಜಾಗ್ರತೆಗಳನ್ನು ತೆಗೆದುಕೊಳ್ಳದೇ ಜನರು ಗುಂಪುಗುಡಿ ಸಾಮಾನುಗಳನ್ನು ತೆಗೆದುಕೊಳ್ಳಲು ಅವಕಾಶ ಮಾಡಿಕೊಟ್ಟು ರೋಗ ಹರಡುವಿಕೆಯಲ್ಲಿ ನಿರ್ಲಕ್ಷ್ಯ ವಹಿಸಿದ್ದು ಕಂಡುಬಂದಿದ್ದು, ಸದರಿ ಆರೋಪಿಯ ವಿರುದ್ಧ ಠಾಣೆಗೆ ಬಂದು ದೂರನ್ನು ನೀಡಿರುತ್ತೇನೆ.

ಸದರಿ ದೂರನ್ನು ಸಾಕ್ಷಿ ನೋಡಿ ಗುರುತಿಸಿದ್ದು ಅದನ್ನು ನಿಪಿ-**1** ಎಂದು, ಸಾಕ್ಷಿಯ ಸಹಿಯನ್ನು ನಿಪಿ-**1(ಎ)** ಎಂದು ಗುರುತಿಸಲಾಯಿತು.

**ಪಾಟೀ ಸವಾಲುಃ ಆರೋಪಿತರ ಪರ ಶ್ರೀ ಜಿ.ಎಸ್ ವಕೀಲರು ವಿ.ಡಿ.ಸಿ ವಕೀಲರ ಪರವಾಗಿ ಕಾಲಾವಕಾಶ ಕೇಳಿದ್ದು, ಸಕಾರಗಳು ಇಲ್ಲದ ಕಾರಣ ಪಾಟೀ ಸವಾಲು ಇಲ್ಲಾ ಎಂದು ತೆಗೆದುಕೊಳ್ಳಲಾಯಿತು.**

ಮರುವಿಚಾರಣೆಃ ಇಲ್ಲ.

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿಯ ಹೇಳಿಕೆಯನ್ನು ನನ್ನ ಉಖ್ತಲೇಖನದ ಮೇರೆಗೆ ಬೆರಳಚ್ಚು ಮಾಡಲಾಗಿದೆ)

ಓ.ಹೇ.ಕೇ.ಸರಿ.ಇದೆ.

ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ,
ದೇವದುರ್ಗ.